# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರು, ದೊಮ್ಮಲೂರು ಉಪ ವಿಭಾಗ ಕಛೇರಿಯಲ್ಲಿ ದಿನಾಂಕ: 25-03-2021 ರಂದು ನಡೆದ ವಾರ್ಡ್ ಸಂಖ್ಯೆ: 112 ದೊಮ್ಮಲೂರು ವಾರ್ಡಿನ ವಾರ್ಡ್ ಸಮಿತಿ ಸಭೆಯ ನಡಾವಳಿಗಳು

ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಕಛೇರಿ ಆದೇಶದ ಸಂಖ್ಯೆ: ಐ12(5)ಪಿಆರ್/35/2020-21, ದಿನಾಂಕ: 21-09-2020 ರ ಆದೇಶದಂತೆ ಮಾರ್ಚ್-2021 ರ ಮಾಹೆಯ ದೊಮ್ಮಲೂರು ವಾರ್ಡಿನ ವಾರ್ಡ್ ಸಮಿತಿ ಸಭೆಯನ್ನು ದಿನಾಂಕ: 25-03-2021 ರಂದು ನೆಡೆಸಲಾಯಿತು.

## ಸಭೆಗೆ ಹಾಜರಿದ್ದವರ ವಿವರಗಳು

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | **ಸನ್ಮಾನ್ಯ ಶ್ರೀ. ಎನ್.ಎ. ಹ್ಯಾರೀಸ್ ರವರು** | **ಮಾನ್ಯ ಶಾಸಕರು, ಶಾಂತಿನಗರ ವಿಧಾನಸಭಾ ಕ್ಷೇತ್ರ** |
| 2 | ಟಿ. ಡಿ. ಮಂಜುನಾಥ್ | ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು ವಾರ್ಡ್-112 (ಹಾಗೂ ಸಹಾಯಕ ಕಾರ್ಯಪಾಲಕ ಅಭಿಯಂತರರು, ದೊಮ್ಮಲೂರು ಉಪ ವಿಭಾಗ) |
| 3 | ಎನ್.ಎಸ್. ಪ್ರಕಾಶ್ | ಕಾರ್ಯದರ್ಶಿಗಳು ಮತ್ತು ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ: 112 |
| 4 | ಅಪ್ಪುರಾಜ್ | ಸಹಾಯಕ ಕಾರ್ಯಪಾಲಕ ಅಭಿಯಂತರರು ಘನತ್ಯಾಜ್ಯ ನಿರ್ವಹಣೆ-ಶಾಂತಿನಗರ ವಿಭಾಗ |
| 5 | ಕೆ. ನಾಗರಾಜ | ಸಹಾಯಕ ಕಾರ್ಯಪಾಲಕ ಅಭಿಯಂತರರು ಬಿ.ಡಬ್ಲ್ಯು.ಎಸ್.ಎಸ್.ಬಿ. |
| 6 | ಮಂಜುನಾಥ | ಸಹಾಯಕ ಅಭಿಯಂತರರು ಎಸ್-3, ಬೆಸ್ಕಾಂ |
| 7 | ಚಂದ್ರಪ್ಪ | ಸಹಾಯಕ ಕಂದಾಯ ಅಧಿಕಾರಿ ದೊಮ್ಮಲೂರು ಉಪ ವಿಭಾಗ |
| 8 | ಸಿ ನಂಜುಂಡಯ್ಯ | ಕಿರಿಯ ಅಭಿಯಂತರರು, ಬೋರ್‌ವೆಲ್ |
| 9 | ಎಲ್. ಸಗಯನಾಥನ್ | ಹಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ಸಂಖ್ಯೆ: 112 |
| 10 | ಪುರುಷೋತ್ತಮ | ಸಮಿತಿ ಸದಸ್ಯರು & ಕಿರಿಯ ಆರೋಗ್ಯ ಪರಿವೀಕ್ಷಕರುವಾರ್ಡ್ ಸಂಖ್ಯೆ: 112 |
| 11 | ಬಿ ಚಂದ್ರಶೇಖರ್ | ಸಹಾಯಕ ಅಭಿಯಂತರರು, ಬೃಹತ್ ನೀರುಗಾಲುವೆ, ಬಿಬಿಎಂಪಿ |
| 12 | ಮಮತ. ಎಂ.ಹೆಚ್ | ಸಹಾಯಕ ಅಭಿಯಂತರರು, ಬಿ.ಡಬ್ಲ್ಯು.ಎಸ್.ಎಸ್.ಬಿ |
| 13 | ಶಶಿಕುಮಾರ್ | ಕೆಲಸ ಪರಿವೀಕ್ಷಕರು ವಾರ್ಡ್ ಸಂಖ್ಯೆ: 112 |
| 14 | ಗಾಯತ್ರಿ | ಟೈಲರಿಂಗ್ ಶಿಕ್ಷಕರು, ವಾರ್ಡ್ ಸಂಖ್ಯೆ: 112 ದೊಮ್ಮಲೂರು, ಬಿಬಿಎಂಪಿ |
| 15 | ದೇವರಾಜು | ಅರಣ್ಯ ಇಲಾಖೆ (ಪೂರ್ವ) |
| 16 | ಮಂಜಪ್ಪ ಹೆಚ್. ಎಸ್. | ಸಹಾಯಕ ಅಭಿಯಂತರರು ಸ್ಟ್ರೀಟ್ ಲೈಟ್ ವಿಭಾಗ, ಬಿಬಿಎಂಪಿ |

ಮು.ತಿ.ನೋ..

| ವಾರ್ಡ್ ಸಮಿತಿ ಸಭೆಯಲ್ಲಿ ಹಾಜರಿದ್ದ ಸಮಿತಿ ಸದಸ್ಯರು ಮತ್ತು ಸಾರ್ವಜನಿಕರು | | |
|---|---|---|
| 1 | ಆರ್. ವಾಸು | ವಾರ್ಡ್ ಸಮಿತಿ ಸದಸ್ಯರು |
| 2 | ಪುಲಿಕೇಶಿ ರೆಡ್ಡಿ | ವಾರ್ಡ್ ಸಮಿತಿ ಸದಸ್ಯರು |
| 3 | ವಿಜಯ್ ಎಂ ಬಿ | ವಾರ್ಡ್ ಸಮಿತಿ ಸದಸ್ಯರು |
| 4 | ಅಂಜಲಿ | ವಾರ್ಡ್ ಸಮಿತಿ ಸದಸ್ಯರು |
| 5 | ದೇವಣ್ಣ | ವಾರ್ಡ್ ಸಮಿತಿ ಸದಸ್ಯರು |

ದಿನಾಂಕ: 25-03-2021 ರಂದು ಪೂರ್ವಾಹ್ನ 10-30 ಗಂಟೆಗೆ ವಾರ್ಡ್ ಸಂಖ್ಯೆ: 112 ದೊಮ್ಮಲೂರು ವಾರ್ಡಿನ ವಾರ್ಡ್ ಸಮಿತಿ ಸಭೆಯನ್ನು ಪ್ರಾರಂಭಿಸಲಾಯಿತು.

ಶ್ರೀ. ಬಿ.ಡಿ. ಮಂಜುನಾಥ ಸಹಾಯಕ ಕಾರ್ಯಪಾಲಕ ಅಭಿಯಂತರರು ಮತ್ತು ನೋಡಲ್ ಅಧಿಕಾರಿಗಳು ಸಭೆಗೆ ಆಗಮಿಸಿದ್ದ ವಾರ್ಡ್ ಸಮಿತಿ ಸದಸ್ಯರುಗಳನ್ನು, ವಿವಿಧ ಇಲಾಖೆಗಳ ಅಧಿಕಾರಿಗಳನ್ನು ಹಾಗೂ ವಾರ್ಡಿನ ನಿವಾಸಿಗಳನ್ನು ಸಭೆಗೆ ಸ್ವಾಗತವನ್ನು ಕೋರಿ ಸಭೆಯನ್ನು ಪ್ರಾರಂಭಿಸಿದರು.

ಸಭೆಯ ಪ್ರಾರಂಭದಲ್ಲಿ ಹಿಂದಿನ ಸಭೆಯ ನಡವಳಿಗಳನ್ನು ಓದಿದರು, ಮತ್ತು ಹಿಂದಿನ ಸಭೆಯಲ್ಲಿ ಸಾರ್ವಜನಿಕರು ತಿಳಿಸಿದ ಸಮಸ್ಯೆಗಳ ಬಗ್ಗೆ ಕೈಗೊಂಡಿರುವ ಕ್ರಮಗಳನ್ನು ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳ ಸಭೆಗೆ ವಿವರಿಸಿದರು.

ನಂತರ ನೋಡಲ್ ಅಧಿಕಾರಿಗಳು ಇಂದಿನ ಸಭೆಯನ್ನು ವಿಶೇಷವಾಗಿ ಬಜೆಟ್‌ಗಾಗಿ ಮೀಸಲಿಟ್ಟಿದ್ದು, ಸಾರ್ವಜನಿಕರು ಪಾಲಿಕೆಯ 2021-22ನೇ ಸಾಲಿನ ಬಜೆಟ್‌ಗೆ ಸಂಬಂಧಿಸಿದ ಸಾರ್ವಜನಿಕರಿಗೆ ಸಲಹೆಗಳನ್ನು ನೀಡಲು ಕೋರಿದರು.

<u>ದಿನಾಂಕ: **26-02-2021 ರ ಸಭೆಯಲ್ಲಿ ಸಾರ್ವಜನಿಕರು ಸಲ್ಲಿಸಿದ ಸಮಸ್ಯೆಗಳ ಮನವಿಗಳು ನಡಾವಳಿಗಳು**:</u>

1. ಶ್ರೀ ವಿಜಯ್ ರವರು ಡಿಸೆಂಬರ್ ತಿಂಗಳ ವಾರ್ಡ್ ಸಭೆಯಲ್ಲಿ ಕೇಂಬ್ರಿಡ್ಜ್ ಬಡಾವಣೆಯ ಪಾರ್ಕ್ ಸುತ್ತಲು ಇರುವ ಪಾದಚಾರಿ ಮಾರ್ಗದ ಎತ್ತರವನ್ನು ಕಡಿಮೆ ಮಾಡಿ ವಾಹನ ನಿಲುಗಡೆಗೆ ಅವಕಾಶ ಕಲ್ಪಿಸುವಂತೆ ಕಾಮಗಾರಿ ನಿರ್ವಹಿಸಲು ಕೋರಿದ್ದರು.

ಸದರಿ ಕಾಮಗಾರಿಗೆ 2021-22ನೇ ಸಾಲಿನ ಆಯವ್ಯಯದಲ್ಲಿ ಅನುದಾನವನ್ನು ಕಲ್ಪಿಸಿಕೊಂಡು ಕೈಗೊಳ್ಳಲಾಗುವುದು ಎಂದು ವಾರ್ಡ್ ಸಭೆಯಲ್ಲಿ ತಿಳಿಸಲಾಗಿತ್ತು.

2. ದಿನಾಂಕ: 22-01-2021 ರ ಸಭೆಯಲ್ಲಿ ಶ್ರೀ. ವಿಜಯ್ ಎಂ. ಬಿ. ರವರು ಮನವಿ ಸಲ್ಲಿಸಿ ಇಸ್ರೋ ಕಾಲೋನಿ ಸ್ಲಂ ಪ್ರದೇಶಕ್ಕೆ ಕುಡಿಯುವ ನೀರಿನ Cistern ಗಳನ್ನು ಸ್ಥಳಾಂತರಿಸುವ ಕುರಿತು.

ಅಧಿಕಾರಿಗಳು, ಈಗಾಗಲೇ ನೀರಿನ Cistern ಗಳನ್ನು ಸ್ಥಳಾಂತರಿಸಲು ಅಂದಾಜು ಪಟ್ಟಿಯನ್ನು ತಯಾರಿಸಿ ಅನುಮೋದನೆಗೆ ಸಲ್ಲಿಸಲಾಗಿದೆ. ಅನುಮೋದನೆಗೊಂಡ ಕೂಡಲೇ Cistern ಗಳನ್ನು ಸ್ಥಳಾಂತರಿಸಲಾಗುವುದು ಎಂದು ಬಿ.ಡಬ್ಲ್ಯು.ಎಸ್.ಎಸ್.ಬಿ. ಅಧಿಕಾರಿಗಳು ತಿಳಿಸಿರುತ್ತಾರೆ.

3. ದೊಮ್ಮಲೂರು ವಾರ್ಡಿನ ನಿವಾಸಿಗಳಾದ The HAL 2nd stage Civic Amenities and cultural Association ರವರು ಪಾಲಿಕೆಯ 2021-22ನೇ ಸಾಲಿನ ಬಜೆಟ್‌ನಲ್ಲಿ ಈ ಕೆಳಕಂಡ ಕಾಮಗಾರಿಗಳನ್ನು ಅಳವಡಿಸಿಕೊಳ್ಳುವಂತೆ ಮನವಿ ಮಾಡಿರುತ್ತಾರೆ.

a) 12th and 13th main roads with footpath and asphalting with proper culverts to be removed.
b) BWSSB pipelines that are more than 40 years old should be changed with width increased as load have increased considerably.
c) As in east side we need footpath both sides of 13th main and 12th A main with south side parking alone.

**ದಿನಾಂಕ: 25-03-2021 ರ ಸಭೆಯಲ್ಲಿ ಸಾರ್ವಜನಿಕರು ಸಲ್ಲಿಸಿದ ಸಮಸ್ಯೆಗಳ ಮನವಿಗಳು ನಡಾವಳಿಗಳು:**

1. The HAL 2nd stage Civic Amenities and cultural Association ರವರು ಸಲ್ಲಿಸಿರುವ ಮನವಿ:
   a. As reported illegal encroachment of footpath as we residents do not have space to walk-both sides parking, both sides vehicle moment and no footpath-we are living compromising our lives.
   ಈ ಬಗ್ಗೆ ನೋಡಲ್ ಅಧಿಕಾರಿಗಳು, ಸಭೆಯಲ್ಲಿ ಹಾಜರಿದ್ದ ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ಸಮಸ್ಯೆಯನ್ನು ತಿಳಿಸಿ ಫುಟ್‌ಪಾತ್ ಒತ್ತುವರಿಯನ್ನು ತೆರವುಗೊಳಿಸುವಂತೆ ಸೂಚಿಸಿರುತ್ತಾರೆ.

   b. Crimes reported at 12A main-mobile snatching case on March 2nd and the recent knife stabbing incident has made the residents live in fear. Need more patrolling with beat registered signed up for our security from 8 pm

   ಈ ಬಗ್ಗೆ ನೋಡಲ್ ಅಧಿಕಾರಿಗಳು, ಸದರಿ ಸಮಸ್ಯೆಯು ಪೋಲೀಸ್ ಇಲಾಖೆಗೆ ಸಂಬಂಧಪಡುವುದರಿಂದ ಪೋಲೀಸ್ ಇಲಾಖೆಗೆ ಅಗತ್ಯ ಕ್ರಮವಹಿಸಲು ತಿಳಿಸಲಾಗುವುದು ಎಂದು ತಿಳಿಸಿರುತ್ತಾರೆ.

   c. Figurine Fitness-a gym at PA Yoga road is a continuous nuisance creator with loud music.. is he registered under any different law.. if so pls specify need action from BCP to make them follow rules as in by other gym on 12th main and elsewhere with sound proof

   ಈ ಬಗ್ಗೆ ನೋಡಲ್ ಅಧಿಕಾರಿಗಳು, ಸದರಿ ಸಮಸ್ಯೆಯು ಪೋಲೀಸ್ ಇಲಾಖೆಗೆ ಸಂಬಂಧಪಡುವುದರಿಂದ ಪೋಲೀಸ್ ಇಲಾಖೆಗೆ ಕ್ರಮಕೈಗೊಳ್ಳಲು ತಿಳಿಸಲಾಗುವುದು ಎಂದು ತಿಳಿಸಿರುತ್ತಾರೆ.

2. Sri. Darshan. N ರವರು ಸಲ್ಲಿಸಿರುವ ಮನವಿ:
   Request for cutting the tree infront of our house No.189 and No.190, 2nd Main, 5th B Cross, Domlur Layout, Bangalore-560071

   ಈ ಬಗ್ಗೆ ನೋಡಲ್ ಅಧಿಕಾರಿಗಳು, ಕೂಡಲೇ ಪಾಲಿಕೆಯ ಅರಣ್ಯ ಇಲಾಖೆಗೆ ತಮ್ಮ ಮನವಿಯನ್ನು ಕಳುಹಿಸಿ ಅಗತ್ಯ ಕ್ರಮವಹಿಸಲು ಸೂಚಿಸಲಾಗುವುದು ಎಂದು ತಿಳಿಸಿರುತ್ತಾರೆ.

3. Sri. Ramjee P.T ರವರು ಸಲ್ಲಿಸಿರುವ ಮನವಿ:
   Request for cutting the tree infront of our house No.157, 3rd D Cross, Domlur Layout, Bangalore-560071

   ಈ ಬಗ್ಗೆ ನೋಡಲ್ ಅಧಿಕಾರಿಗಳು, ಕೂಡಲೇ ಪಾಲಿಕೆಯ ಅರಣ್ಯ ಇಲಾಖೆಗೆ ತಮ್ಮ ಮನವಿಯನ್ನು ಕಳುಹಿಸಿ ಅಗತ್ಯ ಕ್ರಮವಹಿಸಲು ಸೂಚಿಸಲಾಗುವುದು ಎಂದು ತಿಳಿಸಿರುತ್ತಾರೆ.

4. Sri. R.S. Sethi ರವರು ಸಲ್ಲಿಸಿರುವ ಮನವಿ:
   a. 3 (Three) Kitchens have opened on footpath infront of No.777 K, 13th Main Road, HAL 2nd Stage, Indiranagar, Bangalore

   ಈ ಬಗ್ಗೆ ನೋಡಲ್ ಅಧಿಕಾರಿಗಳು, ಸಭೆಯಲ್ಲಿ ಹಾಜರಿದ್ದ ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ಸಮಸ್ಯೆಯನ್ನು ತಿಳಿಸಿ ಕ್ರಮವಹಿಸುವಂತೆ ಸೂಚಿಸಿರುತ್ತಾರೆ.

5. Sri. Venugopal ರವರು ಸಲ್ಲಿಸಿರುವ ಮನವಿ:
   a. 1st Cross from Domlur end near OYO Room has no one way sign board which we were requesting since 2019 to traffic police not installed

   ಈ ಬಗ್ಗೆ ನೋಡಲ್ ಅಧಿಕಾರಿಗಳು, ಸದರಿ ಸಮಸ್ಯೆಯು ಟ್ರಾಫಿಕ್ ಪೋಲೀಸ್ ಇಲಾಖೆಗೆ ಸಂಬಂಧಪಡುವುದರಿಂದ ಟ್ರಾಫಿಕ್ ಪೋಲೀಸ್ ಇಲಾಖೆಗೆ ಅಗತ್ಯ ಕ್ರಮವಹಿಸಲು ತಿಳಿಸಲಾಗುವುದು ಎಂದು ತಿಳಿಸಿರುತ್ತಾರೆ.

ಪು.ತಿ.ನೋ..

b. The Newly laid Sai Baba Road pavements and the approach to it as ramp was a nice idea. But the blocks in few places viz, Hotel Nanda Gokula, 6th Cross, have either sunk or uprooted. This was under TFS project.

ಈ ಬಗ್ಗೆ ನೋಡಲ್ ಅಧಿಕಾರಿಗಳು, ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳಿಗೆ ಸಮಸ್ಯೆಯನ್ನು ತಿಳಿಸಿ ಕ್ರಮವಹಿಸುವಂತೆ ಸೂಚಿಸಲಾಯಿತು.

c. Street lights are not switched on and off @ 6.30 pm and 6 am respectfully. We have reminded svl times to switch off.. csbt BBMP install timers as promised few years ago.?

ಈ ಬಗ್ಗೆ ನೋಡಲ್ ಅಧಿಕಾರಿಗಳು, ಸಭೆಯಲ್ಲಿ ಹಾಜರಿದ್ದ ಶ್ರೀ. ಮಂಜಪ್ಪ, ಸ್ಟ್ರೀಟ್ ಲೈಟ್ ಎಲೆಕ್ಟ್ರಿಕಲ್ ಇಂಜಿನಿಯರ್ ರವರಿಗೆ ಸಮಸ್ಯೆಯನ್ನು ತಿಳಿಸಿ ಕ್ರಮವಹಿಸುವಂತೆ ಸೂಚಿಸಲಾಯಿತು.

6. Sri. D. Janakiram ರವರು ಸಲ್ಲಿಸಿರುವ ಮನವಿ:

Request for full smell from the Drainage at Cambridge layout, Bangalore

ಈ ಬಗ್ಗೆ ನೋಡಲ್ ಅಧಿಕಾರಿಗಳು, ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳಿಗೆ ಸಮಸ್ಯೆಯನ್ನು ತಿಳಿಸಿ ಕ್ರಮವಹಿಸುವಂತೆ ಸೂಚಿಸಲಾಯಿತು.

7. Sri. V. Ramanathan ರವರು ಸಲ್ಲಿಸಿರುವ ಮನವಿ:

Request for Bad smell coming at end of 1st A Cross (Opp to BDA Flats)

ಈ ಬಗ್ಗೆ ನೋಡಲ್ ಅಧಿಕಾರಿಗಳು, ಸಭೆಯಲ್ಲಿ ಹಾಜರಿದ್ದ ಸಹಾಯಕ ಅಭಿಯಂತರರಿಗೆ ಸಮಸ್ಯೆಯನ್ನು ತಿಳಿಸಿ ಕ್ರಮವಹಿಸುವಂತೆ ಸೂಚಿಸಲಾಯಿತು.

8. Sri. Pandiyan ರವರು ಸಲ್ಲಿಸಿರುವ ಮನವಿ:

13ನೇ ಮುಖ್ಯರಸ್ತೆ, 4ನೇ ಅಡ್ಡರಸ್ತೆಯಲ್ಲಿರುವ ಶ್ರೀರಾಮ ದೇವಸ್ಥಾನದ ಮುಂಭಾಗದಲ್ಲಿನ ಉದ್ಯಾನವನವನ್ನು ನಿರ್ವಹಣೆ ಮಾಡುವ ಬಗ್ಗೆ.

ಈ ಬಗ್ಗೆ ನೋಡಲ್ ಅಧಿಕಾರಿಗಳು, ಸಭೆಯಲ್ಲಿ ಹಾಜರಿದ್ದ ತೋಟಗಾರಿಕೆ ಇಲಾಖೆ ರವರಿಗೆ ಸಮಸ್ಯೆಯನ್ನು ತಿಳಿಸಿ ಕ್ರಮವಹಿಸುವಂತೆ ಸೂಚಿಸಲಾಯಿತು.

9. Sri. C.R. Lakshminarayan, ಮಾಜಿ ಮಹಾನಗರ ಪಾಲಿಕೆ ಸದಸ್ಯರು ರವರು ಸಲ್ಲಿಸಿರುವ ಮನವಿ:

ವಾರ್ಡ್ ನಂ.112 ದೊಮ್ಮಲೂರು ವ್ಯಾಪ್ತಿಗೆ ಸೇರಿದ ದೊಮ್ಮಲೂರು ವ್ಯಾಪ್ತಿಗೆ ಸೇರಿದ ದೊಮ್ಮಲೂರು ಲೇಔಟ್ 1ನೇ ಕ್ರಾಸ್, 1ನೇ ಮುಖ್ಯರಸ್ತೆಯಲ್ಲಿರುವ ವಿದ್ಯುತ್ ಪರಿವರ್ತಕವು ಸಾರ್ವಜನಿಕರಿಗೆ ಬಹಳ ತೊಂದರೆಯಾಗುತ್ತಿದ್ದು, ಇದರಿಂದ ಅನೇಕ ಅಪಘಾತಗಳು ನಡೆಯುತ್ತಿದೆ. ವಾರ್ಡ್ ಕಮಿಟಿ ಮೀಟಿಂಗ್‌ನಲ್ಲಿ ಇದರ ಬಗ್ಗೆ ದೂರನ್ನು ಬೆಸ್ಕಾಂಗೆ ನೀಡಿದ್ದೇವೆ. ವಿದ್ಯುತ್ ಪರಿವರ್ತಕವನ್ನು ಬದಲಾವಣೆ ಮಾಡಲು ವಾರ್ಡ್ ಕಮಿಟಿಯಿಂದಲೂ ಬೆಸ್ಕಾಂಗೆ ದೂರನ್ನು ನೀಡಿದ್ದೇವೆ. ವಿದ್ಯುತ್ ಪರಿವರ್ತಕವನ್ನು ಬದಲಾವಣೆ ಮಾಡಬೇಕೆಂದು ಕೆಲಸದ ಆದೇಶ ಮಾಹಿತಿಯು ನಮಗೆ ಬಂದಿದೆ. ಆದರೂ ಇನ್ನೂ ಕೂಡ ಬದಲಾವಣೆಯ ಕೆಲಸ ನಡೆಯುತ್ತಿಲ್ಲ ಎಂದು ತಿಳಿಸಿರುತ್ತಾರೆ.

ಈ ಬಗ್ಗೆ ನೋಡಲ್ ಅಧಿಕಾರಿಗಳು, ಸಭೆಯಲ್ಲಿ ಹಾಜರಿದ್ದ ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಸಮಸ್ಯೆಯನ್ನು ತಿಳಿಸಿ ಕ್ರಮವಹಿಸುವಂತೆ ಸೂಚಿಸಲಾಯಿತು.

ಕೊನೆಯದಾಗಿ ನೋಡಲ್ ಅಧಿಕಾರಿಗಳು ಸಭೆಗೆ ಹಾಜರಾಗಿದ್ದ ಅಧಿಕಾರಿಗಳಿಗೆ ಮತ್ತು ಸಮಿತಿಯ ಸದಸ್ಯರುಗಳಿಗೆ ಹಾಗೂ ಸಾರ್ವಜನಿಕರಿಗೆ ವಂದಿಸಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 112 ದೊಮ್ಮಲೂರು ಮತ್ತು
ಸಹಾಯಕ ಕಾರ್ಯಪಾಲಕ ಅಭಿಯಂತರರು
ದೊಮ್ಮಲೂರು ಉಪ ವಿಭಾಗ, ಬಿ.ಬಿ.ಎಂ.ಪಿ

ಪ್ರತಿಯನ್ನು:

1. ಮಾನ್ಯ ಆಡಳಿತಗಾರರು, ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಸಲ್ಲಿಸಿದೆ.
2. ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಸಲ್ಲಿಸಿದೆ.
3. ವಿಶೇಷ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ಸಲ್ಲಿಸಿದೆ.
4. ವಿಶೇಷ ಆಯುಕ್ತರು (ಆರೋಗ್ಯ & ಘ.ತ್ಯಾ.ನಿ) ರವರ ಅವಗಾಹನೆಗಾಗಿ ಸಲ್ಲಿಸಿದೆ.
5. ಜಂಟಿ ಆಯುಕ್ತರು (ಪೂರ್ವ) ರವರ ಅವಗಾಹನೆಗೆ ಸಲ್ಲಿಸಿದೆ.
6. ಮಾನ್ಯ ಮುಖ್ಯ ಅಭಿಯಂತರರು (ಪೂರ್ವ) ರವರ ಅಮೂಲ್ಯ ಅವಗಾಹನೆಗಾಗಿ ಸಲ್ಲಿಸಿದೆ.
7. ವಾರ್ಡ್ ಸಮಿತಿಯ ಸದಸ್ಯರುಗಳ ಮಾಹಿತಿಗಾಗಿ ಕಳುಹಿಸಿದೆ.
8. ಕಛೇರಿ ಪ್ರತಿ.